**Akashvani : Bangalore**
**Regional Bulletin In Kannada**
**12.07.2025 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**<><*<><>*><>**

ಮುಖ್ಯಾಂಶಗಳು

೧. ವಿಕಸಿತ ಭಾರತ ನಿರ್ಮಾಣಕ್ಕೆ ಯುವ ಪೀಳಿಗೆಯ ಕೊಡುಗೆ ಅತಿ ಮುಖ್ಯ - ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ

೨. ಚನ್ನರಾಯಪಟ್ಟಣ ಹೈಟೆಕ್ ಪಾರ್ಕ್ ; ಭೂಮಿ ನೀಡಲು ರೈತರ ಷರತ್ತು ಬದ್ಧ ಒಪ್ಪಿಗೆ

೩. ಕಬಿನಿ ಜಲಾಶಯದಿಂದ ಕಟ್ಟು ನೀರು ಪದ್ಧತಿಯಲ್ಲಿ ಕಾಲುವೆಗಳಿಗೆ ನೀರು ಹರಿಸಲು ನಿರ್ಧಾರ

೪. ಸಿಂಧನೂರು-ಹುಬ್ಬಳ್ಳಿ-ಬೆಂಗಳೂರು ವಿಸ್ತರಿತ ರೈಲು ಸಂಚಾರ ಸೇವೆ ಆರಂಭ

**<><*<><>*><>**

ದೇಶದ ಅಭಿವೃದ್ಧಿಯಲ್ಲಿ ಯುವಕರ ಪಾತ್ರ ಮಹತ್ವದ್ದಾಗಿದ್ದು, ೨೦೪೭ರ ವೇಳೆಗೆ ವಿಕಸಿತ ಭಾರತವನ್ನಾಗಿ ರೂಪಿಸಲು ಯುವಪೀಳಿಗೆಯ ಕೊಡುಗೆ ಅತಿ ಮುಖ್ಯ ಎಂದು ಕೇಂದ್ರ ಉದ್ಯೋಗ ಖಾತೆ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ಹೇಳಿದ್ದಾರೆ. ಪ್ರಧಾನಮಂತ್ರಿ ಅವರು, ವರ್ಚುವಲ್ ವೀಡಿಯೋ ಕಾನ್ಫರೆನ್ಸ್ ಮೂಲಕ ನಡೆಸಿದ ಬೃಹತ್ ರೋಜ್‌ಗಾರ್ ಮೇಳ ಕಾರ್ಯಕ್ರಮದಲ್ಲಿ ಅವರು ಭಾಗಿಯಾಗಿದ್ದರು. ಇದೇ ಸಂದರ್ಭದಲ್ಲಿ ಬೆಂಗಳೂರಿನಲ್ಲಿ ನೈಋತ್ಯ ರೈಲ್ವೆ ಸಹಯೋಗದಲ್ಲಿ ಆಯೋಜಿಸಿದ್ದ ರೋಜ್‌ಗಾರ್ ಮೇಳವನ್ನು ಉದ್ಘಾಟಿಸಿ ಮಾತನಾಡಿದ ಶೋಭಾ ಕರಂದ್ಲಾಜೆ ಭಾರತ ದೇಶ ಯುವ ರಾಷ್ಟ್ರವಾಗಿದೆ. ಸುಮಾರು ೧೪೦ ಕೋಟಿ ಜನಸಂಖ್ಯೆಯನ್ನು ಭಾರತ ದೇಶ ಹೊಂದಿದೆ. ಆ ಮೂಲಕ ವಿಶ್ವದಲ್ಲೇ ಹೆಚ್ಚು ಜನಸಂಖ್ಯೆಯನ್ನು ಹೊಂದಿದ ರಾಷ್ಟ್ರ ಭಾರತವಾಗಿದೆ. ಹೊಸ ಉದ್ದಿಮೆಗಳಿಂದ ಹೆಚ್ಚಿನ ಉದ್ಯೋಗಾವಕಾಶಗಳು ದೊರೆಯಲಿವೆ. ಇದರಿಂದ ದೇಶದ ಆರ್ಥಿಕತೆ ಬೆಳವಣಿಗೆಯಾಗಲಿದೆ ಎಂದರು. ಕೇಂದ್ರ ಸರ್ಕಾರದ ವಿವಿಧ ಇಲಾಖೆಗಳು, ಸಚಿವಾಲಯಗಳು ಹಾಗೂ ಸ್ವಾಯತ್ತ ಸಂಸ್ಥೆಗಳಲ್ಲಿ ನೇಮಕವಾದ ಅಭ್ಯರ್ಥಿಗಳು ಪ್ರಾಮಾಣಿಕತೆ, ಕಠಿಣ ಪರಿಶ್ರಮದಿಂದ ಕೆಲಸ ಮಾಡುವುದರಿಂದ ದೇಶದ ಅಭಿವೃದ್ಧಿಯಲ್ಲಿ ಕೈ ಜೋಡಿಸಬೇಕು ಎಂದು ತಿಳಿಸಿದರು.

ಧ್ವನಿ : ಶೋಭಾ ಕರಂದ್ಲಾಜೆ ( ೩೦ ಸೆಕೆಂಡ್ಸ್)

ಇದೇ ಸಂದರ್ಭದಲ್ಲಿ ಹೊಸದಾಗಿ ನೇಮಕಾತಿ ಹೊಂದಿದ ಅಭ್ಯರ್ಥಿಗಳಿಗೆ ನೇಮಕಾತಿ ಪತ್ರಗಳನ್ನು ವಿತರಣೆ ಮಾಡಲಾಯಿತು.

**<><*<><>*><>**

ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ, ವರ್ಚುವಲ್ ಮೂಲಕ ನಡೆದ ರೋಜ್‌ಗಾರ್ ಕಾರ್ಯಕ್ರಮದಲ್ಲಿ ಹುಬ್ಬಳ್ಳಿಯಿಂದ ಸೇರ್ಪಡೆಯಾಗಿ ಪಾಲ್ಗೊಂಡರು. ನೈರುತ್ಯ ರೈಲ್ವೆ ಸಹಯೋಗದಲ್ಲಿ ಆಯೋಜಿಸಿದ್ದ ರೋಜಗಾರ್ ಮೇಳವನ್ನು ಉದ್ಘಾಟಿಸಿ ಅವರು ಮಾತನಾಡಿದರು. ರೋಜ್‌ಗಾರ್ ಮೇಳದ ಮೂಲಕ ೧೦ ವರ್ಷದಲ್ಲಿ ೧೦ ಲಕ್ಷ ಉದ್ಯೋಗ ನೀಡುವ ಗುರಿಯನ್ನು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು

ಹೊಂದಿದ್ದು, ಅದರಂತೆ ರೋಜಗಾರ ಮೇಳದಲ್ಲಿ ಹೊಸದಾಗಿ ನೇಮಕಾತಿ ಹೊಂದಿದ ಅಭ್ಯರ್ಥಿಗಳಿಗೆ ನೇಮಕಾತಿ ಪತ್ರವನ್ನು ವಿತರಣೆ ಮಾಡಲಾಗುತ್ತಿದೆ ಎಂದು ಅವರು ಹೇಳಿದರು.

**<><*<><>*><>**

ದೇವನಹಳ್ಳಿ ತಾಲ್ಲೂಕು ಚನ್ನರಾಯಪಟ್ಟಣ ಹೋಬಳಿಯ ವಿವಿಧ ರೈತ ಸಂಘಟನೆಗಳ ಪ್ರತಿನಿಧಿಗಳು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ, ೪೪೯ ಎಕರೆಯನ್ನು ನೀಡಲು ಸಿದ್ಧವಿರುವುದಾಗಿ ತಿಳಿಸಿದ್ದಾರೆ. ಮುಖ್ಯಮಂತ್ರಿಯವರನ್ನು ಬೆಂಗಳೂರಿನಲ್ಲಿಂದು ಕಾವೇರಿ ನಿವಾಸದಲ್ಲಿ ಭೇಟಿ ಮಾಡಿದ ಪ್ರತಿನಿಧಿಗಳು, ಸ್ವಾಧೀನ ಪಡಿಸಿಕೊಳ್ಳುವ ಭೂಮಿಗೆ ನ್ಯಾಯಯುತವಾದ ಸೂಕ್ತ ಬೆಲೆ ನಿಗದಿ ಪಡಿಸುವಂತೆ ಮನವಿ ಸಲ್ಲಿಸಿದರು. ಇದೇ ವೇಳೆ ನಾಲ್ಕು ಷರತ್ತುಗಳನ್ನು ರೈತರು ಮುಂದಿರಿಸಿದ್ದಾರೆ. ಈ ಸಂದರ್ಭದಲ್ಲಿ ಸಚಿವರಾದ ಕೆ.ಎಚ್.ಮುನಿಯಪ್ಪ, ಬಿ.ಎಸ್ ಸುರೇಶ್, ಕಾನೂನು ಸಲಹೆಗಾರರಾದ ಎ.ಎಸ್ ಪೊನ್ನಣ್ಣ, ಅಪರ ಮುಖ್ಯ ಕಾರ್ಯದರ್ಶಿ ಅಂಜುಂ ಪರ್ವೇಜ್ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು. ಚನ್ನರಾಯಪಟ್ಟಣ ಹೋಬಳಿಯಲ್ಲಿ ಹೈಟೆಕ್ ಡಿಫೆನ್ಸ್ ಮತ್ತು ಏರೋಸ್ಪೇಸ್ ಪಾರ್ಕ್ ನಿರ್ಮಾಣಕ್ಕೆ ೧೦ ಗ್ರಾಮಗಳ ೧ ಸಾವಿರದ ೨೮೨ ಎಕರೆ ಭೂಮಿಯ ಅವಶ್ಯಕತೆಯಿದ್ದು, ಭೂಮಿ ನೀಡಲು ರೈತರು ಪ್ರತಿರೋಧ ವ್ಯಕ್ತಪಡಿಸುತ್ತಿದ್ದರು.

**<><*<><>*><>**

ಹೆಣ್ಣು ಮಕ್ಕಳು ಶಿಕ್ಷಣ ಪಡೆದು ಆರ್ಥಿಕವಾಗಿ, ಸಾಮಾಜಿಕವಾಗಿ ಸಬಲರಾದರೆ ಮಾತ್ರ ಸಾಮಾಜಿಕ ಬೆಳವಣಿಗೆ ಸಾಧ್ಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದಿಂದ ರಾಣಿ ಅಹಲ್ಯಬಾಯಿ ಹೊಳ್ಕರ್ ಅವರ ೩೦೦ನೇ ಜನ್ಮ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ರಾಣಿ ಅಹಲ್ಯಬಾಯಿ ಹೊಳ್ಕರ್ ಅವರ ಶಿಕ್ಷಣ ಕ್ರಾಂತಿ ಎಲ್ಲ ಸಂಘಟನೆಗಳಿಗೂ ಪ್ರೇರಣೆಯಾಗಿದೆ. ಅಹಲ್ಯಬಾಯಿ ಅವರು, ಸಾಮಾಜಿಕ ಬದಲಾವಣೆಯನ್ನು ಪ್ರಮುಖ ಪಾತ್ರ ವಹಿಸಿದ್ದರು. ಇಂದು ಹೆಣ್ಣು ಮಕ್ಕಳು ಶಿಕ್ಷಣದಲ್ಲಿ ಉತ್ತಮ ಸಾಧನೆ ಮಾಡುತ್ತಿದ್ದ ಸೈನ್ಯದಲ್ಲಿ ಅಂತರಿಕ್ಷದಲ್ಲಿ ಕೆಲಸ ಮಾಡುತ್ತಿರುವುದು ಮಹಿಳಾಕುಲದ ಪ್ರಗತಿಯ ಪ್ರತೀಕವಾಗಿದೆ ಎಂದು ಸಿದ್ದರಾಮಯ್ಯ ಹೇಳಿದರು. ಮಹಿಳೆಯರ ಸಬಲೀಕರಣಕ್ಕೆ ಸರ್ಕಾರ ಗೃಹಲಕ್ಷ್ಮಿ, ಶಕ್ತಿಯೋಜನೆ ಸೇರಿದಂತೆ ಹಲವು ಕಾರ್ಯಕ್ರಮಗಳನ್ನು ಜಾರಿ ಮಾಡಿದೆ ಎಂದು ಮುಖ್ಯಮಂತ್ರಿಯವರು ಈ ಸಂದರ್ಭದಲ್ಲಿ ಹೇಳಿದರು.

**<><*<><>*><>**

ಡಿಜಿಟಲ್ ಇಂಡಿಯಾ ಹಣಕಾಸು ವಹಿವಾಟು ಮೂಲಕ ದೇಶವು ಪ್ರತಿ ವರ್ಷ ಸುಮಾರು ೨ ಲಕ್ಷ ಕೋಟಿ ರೂಪಾಯಿಗಳನ್ನು ಉಳಿತಾಯ ಮಾಡುತ್ತಿದೆ ಎಂದು ಬೆಂಗಳೂರು ದಕ್ಷಿಣ ಕ್ಷೇತ್ರದ ಸಂಸದ ತೇಜಸ್ವಿ ಸೂರ್ಯ ಹೇಳಿದ್ದಾರೆ. ಚಿಕ್ಕಮಗಳೂರು ನಗರದಲ್ಲಿ ಇಂದು ನಡೆದ ನವಭಾರತ ಯುವ ಧ್ವನಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು ಭಾರತ ದೇಶವು ಸಾಕಷ್ಟು ವಿಚಾರದಲ್ಲಿ ಅಭಿವೃದ್ಧಿ ಜೊತೆಗೆ ಬದಲಾವಣೆಯಾಗಿದೆ. ಪ್ರಧಾನಿ ನರೇಂದ್ರ ಮೋದಿ ಕ್ರಾಂತಿಕಾರಕ ಬದಲಾವಣೆಯನ್ನು ಮಾಡಿದ್ದಾರೆ. ದೇಶದ ಕೃಷಿ ಬಜೆಟ್ ೫ ಪಟ್ಟು ಹೆಚ್ಚಾಗಿದೆ. ೨೫ ಕೋಟಿ ರೈತರಿಗೆ ಮಣ್ಣಿನ ಆರೋಗ್ಯ ಕಾರ್ಡ್ ವಿತರಣೆ ಮಾಡಲಾಗಿದೆ ಎಂದು ಹೇಳಿದರು. ಕಳೆದ ೧೧ ವರ್ಷಕ್ಕೆ ಹೋಲಿಕೆ ಮಾಡಿದಲ್ಲಿ ಬೇಳೆ ಕಾಳುಗಳು ಇತರೆ ಕಾಳುಗಳನ್ನು ಶೇಕಡ ೭ ಸಾವಿರ ೩೫೦ ಹೆಚ್ಚಿನ ದರದಲ್ಲಿ ಕೇಂದ್ರ ಖರೀದಿ ಮಾಡುತ್ತಿದೆ. ಪ್ರಧಾನ ಮಂತ್ರಿ ಫಸಲ್ ಭೀಮ ಯೋಜನೆಯಲ್ಲಿ ೧ ಲಕ್ಷದ ೮೬ ಸಾವಿರ ಕೋಟಿ ರೂಪಾಯಿಗಳ ವಿಮಾ ಹಣವನ್ನು ದೇಶದ ರೈತರಿಗೆ ನೀಡಲಾಗಿದೆ ಎಂದು ಅವರು ಹೇಳಿದರು.

**<><*<><>*><>**

ಮೈಸೂರು ಜಿಲ್ಲೆಯ ಕಬಿನಿ ಜಲಾಶಯದಿಂದ ಅಚ್ಚುಕಟ್ಟು ಪ್ರದೇಶಕ್ಕೆ ಮುಂಗಾರು ಹಂಗಾಮಿಗಾಗಿ 'ಕಟ್ಟು ನೀರು ಪದ್ಧತಿ'ಯಲ್ಲಿ ಕಾಲುವೆಗಳಿಗೆ ನೀರು ಹರಿಸಲು ನಿರ್ಧರಿಸಲಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ತಿಳಿಸಿದ್ದಾರೆ. ಇಂದು ನಡೆದ ನೀರಾವರಿ ಸಲಹಾ ಸಮಿತಿ ಸಭೆಯಲ್ಲಿ ಈ ನಿರ್ಣಯ ಕೈಗೊಳ್ಳಲಾಗಿದೆ. ಇದೇ ೧೫ ರಿಂದ  ಕೆರೆಕಟ್ಟೆಗಳಿಗೆ  ಹಾಗೂ ಜುಲೈ ೨೫ ರಿಂದ ತಿಂಗಳಲ್ಲಿ ೧೫ ದಿನ ಹರಿಸಿ, ೧೦ ದಿನ ನಿಲ್ಲಿಸುವ-ಕಟ್ಟು ಪದ್ಧತಿಯ ಆಧಾರದಲ್ಲಿ ಕಬಿನಿ ಜಲಾಶಯದ ನಾಲಾ ಜಾಲಗಳಲ್ಲಿ ನೀರು ಹರಿಸಲಾಗುವುದು ಎಂದು ಅವರು ತಿಳಿಸಿದ್ದಾರೆ. ಸಭೆಯಲ್ಲಿ ನಾಲಾ ಜಾಲದ ಪ್ರಸ್ತುತ ಸ್ಥಿತಿಗತಿಗಳ ಬಗ್ಗೆ ನೀರಾವರಿ ಇಲಾಖೆಯಿಂದ ಮಾಹಿತಿ ಪಡೆಯಲಾಗಿದ್ದು, ನಾಲೆಯಲ್ಲಿ ಹೂಳು ಹಾಗೂ ಜಂಗಲ್ ತೆರವುಗೊಳಿಸಿ ನಂತರ ನೀರು ಹರಿಸಲು ಅಗತ್ಯ ಕ್ರಮ ವಹಿಸುವಂತೆ ಅಧಿಕಾರಿಗಳಿಗೆ ಸೂಚಿಸಿದ್ದಾಗಿ ಸಚಿವರು ತಿಳಿಸಿದರು.

**<><*<><>*><>**

ಸಿಂಧನೂರು-ಹುಬ್ಬಳ್ಳಿ-ಬೆಂಗಳೂರು ವಿಸ್ತರಿತ ರೈಲು ಸಂಚಾರ ಸೇವೆಗೆ ರೈಲ್ವೆ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ಸಿಂಧನೂರಿನಲ್ಲಿಂದು ಚಾಲನೆ ನೀಡಿದರು.  ಈ ಸಂದರ್ಭದಲ್ಲಿ ಮಾತನಾಡಿದ ಅವರು, ರಾಯಚೂರು ಜಿಲ್ಲೆ ಸಿಂಧನೂರು ತುಂಗಭದ್ರಾ ಎಡದಂಡೆ ಕಾಲುವೆಯ ನೀರಾವರಿ ವ್ಯಾಪ್ತಿಯಲ್ಲಿದ್ದು, ಇದರ ಸುತ್ತಲಿನ  ಕಪ್ಪು ಮಣ್ಣಿನ ಭೂಭಾಗಗಳಲ್ಲಿ ವ್ಯಾಪಕ ಭತ್ತದ ಕೃಷಿ  ವ್ಯವಸಾಯ ನಡೆಯುತ್ತದೆ. ಈ ಕಾರಣದಿಂದ ಇದನ್ನು "ರಾಯಚೂರಿನ ಭತ್ತದ ಕಣಜ" ಎಂದೇ ಪ್ರಸಿದ್ಧವಾಗಿದೆ. ಹೊಸ ರೈಲು ಸಂಪರ್ಕದಿಂದ ಈ ಭಾಗದ ಜನರ ಆರ್ಥಿಕ ಅಭಿವೃದ್ಧಿಗೂ ನೆರವಾಗಲಿದೆ ಎಂದರು. ಈಗಾಗಲೇ ಸಿಂಧನೂರಿನಿಂದ ಹುಬ್ಬಳ್ಳಿ ಕಡೆಗೆ ಪ್ರತಿದಿನ ಸಂಚರಿಸುತ್ತಿರುವ ಪ್ಯಾಸೆಂಜರ್ ರೈಲು ಸೇವೆಗೆ ಜನರಿಂದ ಉತ್ತಮ ಪ್ರತಿಕ್ರಿಯೆ ದೊರೆತ್ತಿದೆ. ಈಗ ಹೊಸದಾಗಿ ಹುಬ್ಬಳ್ಳಿ - ಬೆಂಗಳೂರು ಎಕ್ಸ್‌ಪ್ರೆಸ್ ರೈಲು ಸೇವೆಯನ್ನು ಸಿಂಧನೂರಿನವರೆಗೆ ವಿಸ್ತರಿಸಿ, ಈ ಭಾಗದ ಜನರ ನಿರೀಕ್ಷೆಯನ್ನು ಪೂರೈಸಲಾಗಿದೆ ಎಂದರು. ಈ ಹೊಸ ರೈಲು ಸೇವೆಯು ಸಿಂಧನೂರು ಮತ್ತು ಸುತ್ತಮುತ್ತಲ ಪ್ರದೇಶಗಳಿಗೆ ಶ್ರೇಷ್ಠ ಸಂಚಾರ ಸಂಪರ್ಕವನ್ನು ಕಲ್ಪಿಸಿ, ಈ ಭಾಗದ ವಾಣಿಜ್ಯ ಚಟುವಟಿಕೆಗಳಿಗೆ ಬಲ ನೀಡಲಿದೆ, ಕೈಗಾರಿಕಾ ವಿಸ್ತರಣೆಗೆ ಅನುಕೂಲವಾಗಲಿದೆ. ಶೈಕ್ಷಣಿಕ ಅಭ್ಯುದಯಕ್ಕೆ ಹಾಗೂ ಕೃಷಿಕರ ಉತ್ಪನ್ನಗಳನ್ನು ದೊಡ್ಡ ಮಾರುಕಟ್ಟೆಗೆ ತಲುಪಿಸಲು ಸಹಕಾರಿಯಾಗಲಿದೆ ಎಂದು ಅಭಿಪ್ರಾಯ ಪಟ್ಟರು.

**<><*<><>*><>**

ಕಾರ್ಗಿಲ್ ವಿಜಯ ದಿವಸದ ಜನಸಂಪರ್ಕ ಕಾರ್ಯಕ್ರಮದ ಭಾಗವಾಗಿ ಭಾರತೀಯ ಸೇನೆಯ ಹಿರಿಯ ಅಧಿಕಾರಿ ನೇತೃತ್ವದ ತಂಡ ಬೆಳಗಾವಿ ಜಿಲ್ಲೆಯಲ್ಲಿಂದು ಹುತಾತ್ಮ ಎನ್.ಕೆ. ಯಶವಂತ ದುರ್ಗಪ್ಪ ಕೊಲ್ಕರ್ ಅವರ ಪತ್ನಿ ಸಾವಿತ್ರಿದೇವಿಯವರನ್ನು ಭೇಟಿ ಮಾಡಿತು. ಸೇನೆಯ ಹಿರಿಯ ಅಧಿಕಾರಿ ನೈಬ್ ಸುಬೇದಾರ್ ತಿಲಕ್ ಅವರು, ಸಾವಿತ್ರಿ ದೇವಿಯವರಿಗೆ ಈ ಸಂದರ್ಭದಲ್ಲಿ ಸ್ಮರಣ ಕಾಣಿಕೆ ಹಾಗೂ ಪತ್ರ ಹಸ್ತಾಂತರಿಸಿದರು. ನಿವೃತ್ತ ಸೈನಿಕರು, ನೇಸರ್ಗಿಯ ಶಾಲಾ ಮಕ್ಕಳು ಈ ಸಂದರ್ಭದಲ್ಲಿ ಹಾಜರಿದ್ದು, ಹುತಾತ್ಮ ಯಶವಂತ ಅವರಿಗೆ ಗೌರವ ನಮನ ಸಲ್ಲಿಸಿದರು.

**<><*<><>*><>**

ದಾವಣಗೆರೆ ಜಿಲ್ಲೆಯ ೨೪ ಕ್ಕೂ ಅಧಿಕ ನ್ಯಾಯಾಲಯಗಳಲ್ಲಿ ಇಂದು ನಡೆದ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ೯ ಸಾವಿರಕ್ಕೂ ಅಧಿಕ ಪ್ರಕರಣಗಳನ್ನು ರಾಜೀ ಸಂಧಾನದ ಮೂಲಕ ಬಗೆಹರಿಸಲಾಗಿದೆ. ಇದೇ ವೇಳೆ ವಿಚ್ಛೇಧನ ಬಯಸಿದ್ದ ೨೫ ದಂಪತಿ ತಮ್ಮ ಮುನಿಸು ಮರೆತು ಒಂದಾದರು. ಅಮೇರಿಕಾದಲ್ಲಿ ನೆಲೆಸಿದ್ದ ದಾವಣಗೆರೆ ಮೂಲದ ವ್ಯಕ್ತಿಯೊಬ್ಬರು ತಮ್ಮ ಜಮೀನು ವ್ಯಾಜ್ಯವನ್ನು ವಿಡಿಯೋ ಕಾನ್ಫರೆನ್ಸ್ ಮೂಲಕ ರಾಜೀ ಸಂಧಾನದೊಂದಿಗೆ ಬಗೆಹರಿಸಿಕೊಂಡಿದ್ದು ವಿಶೇಷವಾಗಿತ್ತು.

**<><*<><>*><>**

ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆ ಒಳಗೊಂಡು ಒಟ್ಟು ೩೧ ನ್ಯಾಯಾಲಯಗಳಲ್ಲಿ ಇಂದು ರಾಷ್ಟ್ರೀಯ ಲೋಕ್ ಅದಾಲತ್ ನಡೆಯಿತು. ಈ ವೇಳೆ ಜಿಲ್ಲೆಯಲ್ಲಿ ೬೯ ಸಾವಿರದ ೩೫೪ ವಿವಿಧ ಚಾಲ್ತಿ ಪ್ರಕರಣಗಳಿದ್ದು, ಅದರಲ್ಲಿ ರಾಜೀ ಆಗಬಹುದಾದ ೧೯ ಸಾವಿರದ ೭೮೪ ಪ್ರಕರಣಗಳನ್ನು ಗುರುತಿಸಿದ್ದು, ಇದರಲ್ಲಿ ೧೧ ಸಾವಿರದ ೯೩೧ ಪ್ರಕರಣಗಳು ರಾಜೀಯಾಗಿವೆ ಎಂದು ಜಿಲ್ಲಾ ನ್ಯಾಯಾಧೀಶೆ ಕೆ.ಜಿ.ಶಾಂತಿ ತಿಳಿಸಿದ್ದಾರೆ. ಇದರಲ್ಲಿ ಜಮೀನುಗಳಿಗೆ ಸಂಬಂಧಪಟ್ಟ ವ್ಯಾಜ್ಯಗಳು, ಮನೆ ಹಾಗೂ ನಿವೇಶನಗಳಿಗೆ ಸಂಬಂಧಪಟ್ಟ ವ್ಯಾಜ್ಯಗಳು, ಭೂಸ್ವಾಧೀನ ಪ್ರಕರಣಗಳು, ಬ್ಯಾಂಕ್ ವಸೂಲಾತಿ ಪ್ರಕರಣಗಳು, ದರಖಾಸ್ತು ಅರ್ಜಿಗಳು, ಕಾರ್ಮಿಕ ಪ್ರಕರಣಗಳು, ಮರಳು ಕಳ್ಳ ಸಾಗಾಣಿಕೆ ಪ್ರಕರಣಗಳು, ಚೆಕ್‌ಬೌನ್ಸ್ ಪ್ರಕರಣಗಳು, ಮೋಟರ್ ವಾಹನ ಅಪಘಾತ ಪ್ರಕರಣಗಳು, ವೈವಾಹಿಕ ಪ್ರಕರಣಗಳು ಹಾಗೂ ರಾಜೀ ಆಗಲು ಅರ್ಹವಿರುವ ಕ್ರಿಮಿನಲ್ ಪ್ರಕರಣಗಳು ಸೇರಿದಂತೆ ಹಲವಾರು ಪ್ರಕರಣಗಳನ್ನು ರಾಜೀಗಾಗಿ ಗುರುತಿಸಲಾಗಿದೆ.

**<><*<><>*><>**

ರಾಜ್ಯ ಸರ್ಕಾರ ರೈತರನ್ನು ಸಂಪೂರ್ಣ ಕಡೆಗಣಿಸಿದ್ದು, ರೈತರು ಸಂಕಷ್ಟದಲ್ಲಿ ಇದ್ದರೂ ಕಣ್ಣು ಮುಚ್ಚಿ ಕುಳಿತಿದೆ ಎಂದು ಬಿಜೆಪಿ ರಾಜ್ಯ ರೈತ ಮೋರ್ಚಾ ಅಧ್ಯಕ್ಷ ಎ.ಎಸ್ ಪಾಟೀಲ್ ಆರೋಪಿಸಿದ್ದಾರೆ. ಹಾಸನ ಜಿಲ್ಲೆಯಲ್ಲಿ ಹಾನಿಗೀಡಾಗಿರುವ ಮೆಕ್ಕೆ ಜೋಳ ಜಮೀನಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಾಸನ ಜಿಲ್ಲೆಯಲ್ಲಿ ಈ ಬಾರಿ ಸುಮಾರು ೧ ಲಕ್ಷದ ೧೦ ಸಾವಿರ ಹೆಕ್ಟೇರ್ ಜಮೀನಿನಲ್ಲಿ ಶೇಕಡಾ ೫೦ ಕ್ಕಿಂತ ಹೆಚ್ಚು ಪ್ರದೇಶದಲ್ಲಿ ಬಿಳಿಸುಳಿ ರೋಗದಿಂದ ಬೆಳೆ ನಾಶವಾಗಿದೆ. ಆದರೆ ಈವರೆಗೆ ಜಿಲ್ಲೆಗೆ ಕೃಷಿ ಸಚಿವರು ಅಥವಾ ಯಾವುದೇ ಕೃಷಿ ಇಲಾಖೆಯ ಪ್ರಮುಖ ಅಧಿಕಾರಿಗಳು ಭೇಟಿ ನೀಡದೆ ಇರುವುದು ರೈತರ ಮೇಲಿನ ಸರ್ಕಾರದ ನಿರ್ಲಕ್ಷ್ಯಕ್ಕೆ ಹಿಡಿದ ಕೈಗನ್ನಡಿಯಾಗಿದೆ ಎಂದು ಟೀಕಿಸಿದರು. ರಾಜ್ಯದಲ್ಲಿ ಸುಮಾರು ೨೬ ಲಕ್ಷ ಹಾಲು ಉತ್ಪಾದಕ ಕುಟುಂಬಗಳು ಇದ್ದು ಅವರಿಗೆ ರಾಜ್ಯ ಸರ್ಕಾರ ನೀಡಬೇಕಾಗಿದ್ದ ಸುಮಾರು ೯೦೦ ಕೋಟಿ ರೂಪಾಯಿ ಬಾಕಿ ಉಳಿಸಿಕೊಂಡಿದೆ ಎಂದು ದೂರಿದರು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**